ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು(ಆಡಳಿತ) ರವರ ಕಾರ್ಯಾಲಯ ಕಲಬುರಗಿ

ಸಂಖ್ಯೆ:ಸಿ2(4)/ಆಡಳಿತ/ಸೇವಕ/ಬಡ್ತಿ/113/2020-21 ದಿನಾಂಕ:15-02-2021

**ಅಧಿಸೂಚನೆ**

ವಿಷಯ:-ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಗ್ರೂಪ-ಡಿ ವೃಂದದ ಸೇವಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ದಿನಾಂಕ:01-01-2021 ರಲ್ಲಿದ್ದಂತೆ ಸೇವಾ ಹಿರಿತನದ ಆಧಾರದ ಮೇರೆಗೆ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ:-1)ಕರ್ನಾಟಕ ಸರ್ಕಾರಿ ನೌಕರರ(ಜೇಷ್ಠತಾ)ನಿಯಮಗಳು 1957 ನಿಯಮ(5) ರಂತೆ.

2)ಸರ್ಕಾರಿ ಪತ್ರ ಸಂಖ್ಯೆ:ಇಡಿ 202 ಎಸ್‌ಎಲ್‌ಬಿ 2014 ದಿನಾಂಕ:20-05-2014.

3)ಸರ್ಕಾರಿ ಪತ್ರ ಸಂಖ್ಯೆ:ಇಡಿ 152 ಎಲ್‌ಬಿಪಿ 2014 ದಿನಾಂಕ:20-05-2014.

4)ಸರ್ಕಾರದ ಪತ್ರ ಸಂಖ್ಯೆ:ಡಿ.ಪಿ.ಎ.ಆರ್186ಎಸ್.ಆರ್.ಎಸ್2018 ಬೆಂಗಳೂರು ದಿ:15-05-2019.

- * * * * * * -

ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಗ್ರೂಪ-ಡಿ ವೃಂದದ ಸೇವಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ದಿನಾಂಕ: 01-01-2021 ರಲ್ಲಿದ್ದಂತೆ ಸೇವಾ ಹಿರಿತನದ ಆಧಾರದ ಮೇರೆಗೆ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಸಿದ್ಧಗೊಳಿಸಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಪ್ರಕಟಿಸಲಾಗುತ್ತಿದೆ. ಸದರಿ ಪಟ್ಟಿಗೆ ಆಕ್ಷೇಪಣೆಯನ್ನು ದಿನಾಂಕ:05-03-2021 ರಂದು ಕಛೇರಿ ಅವಧಿವರೆಗೆ ಸಲ್ಲಿಸಲು ಸೂಚಿಸಿದೆ. ಸದರಿ ಪಟ್ಟಿಯನ್ನು ಈ ಕಾರ್ಯಾಲಯದ ವೆಬ್‌ಸೈಟ್ (www.ddpikalaburgi.in)ದಲ್ಲಿ ಗಮನಿಸಬಹುದು.

1) ಮೂಲ ವೃಂದ, ಸ್ಥಳಿಯ ವೃಂದ ಮತ್ತು ಉಳಿದ ಮೂಲ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯಲ್ಲಿನ ನೌಕರರ ಸೇವಾ ಮಾಹಿತಿಯು ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಒದಗಿಸಿರುವ ಮಾಹಿತಿಯನ್ನಾಧರಿಸಿ ಜೇಷ್ಠತಾ ಪಟ್ಟಿಯಲ್ಲಿ ನಿಗದಿಪಡಿಸಿದಂತೆ ಸಿದ್ಧಪಡಿಸಲಾಗಿದೆ.
2) ಮೂಲ ವೃಂದ, ಸ್ಥಳಿಯ ವೃಂದ ಮತ್ತು ಉಳಿದ ಮೂಲ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯಲ್ಲಿನ ನೌಕರರ ಸೇವಾ ವಿವರ ಮಾಹಿತಿ ಜನ್ಮ ದಿನಾಂಕ, ಸೇವೆಗೆ ಸೇರಿದ ದಿನಾಂಕ, ವಿದ್ಯಾರ್ಹತೆ ಮತ್ತು ಜೇಷ್ಠತಾ ಕ್ರಮಾಂಕಗಳ ಪರಿಶೀಲನೆಗೆ ಒಪ್ಪಿಸುವ ಷರತ್ತಿಗೆ ಒಳಪಟ್ಟಿದೆ.
3) ಮೂಲ ವೃಂದ, ಸ್ಥಳಿಯ ವೃಂದ ಮತ್ತು ಉಳಿದ ಮೂಲ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯಲ್ಲಿ ನಮೂದಿಸಿದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ದಾಖಲೆಗಳನ್ನು ಪರಿಶೀಲನೆಗೆ ಒಪ್ಪಿಸುವ ಷರತ್ತಿಗೆ ಒಳಪಟ್ಟಿದೆ. ಹಾಗೂ ಈ ಜೇಷ್ಠತಾ ಪಟ್ಟಿಯಲ್ಲಿ ಯಾವುದೇ ತರಹದ ದೋಷಗಳನ್ನು ಕಂಡು ಬಂದಲ್ಲಿ ಅದನ್ನು ಸರಿಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.
4) ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ನಿಗದಿತ ಅವಧಿಯಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸತಕ್ಕದ್ದು. ಒಂದು ವೇಳೆ ನಿಗದಿತ ಅವಧಿಯಲ್ಲಿ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದಲ್ಲಿ ಈ ಮಾಹಿತಿ ಸರಿಯಿರುವುದು ಎಂದು ಪರಿಗಣಿಸಿ ಹಾಗೂ ಅದಕ್ಕೆ ಸಂಬಂಧಪಟ್ಟ ನೌಕರರುಗಳು, ಶಾಲಾ ಮುಖ್ಯಸ್ಥರುಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಜವಾಬ್ದಾರರನ್ನಾಗಿಸಿ ಈ ಪಟ್ಟಿಯನ್ನು ಅಂತಿಮಗೊಳಿಸಲಾಗುವುದು.
5) ಆಕ್ಷೇಪಣೆಯನ್ನು ಸಲ್ಲಿಸುವವರು ಈ ಅಧಿಸೂಚನೆಯೊಂದಿಗೆ ನೀಡಲಾದ ನಮೂನೆಯಲ್ಲಿ ಎಲ್ಲಾ ಅಂಕಣದಲ್ಲಿ ಮಾಹಿತಿ ಭರಿಸಿ, ಮಾಹಿತಿಯನ್ನು ಪುಷ್ಠೀಕರಿಸುವ ದಾಖಲೆಗಳೊಂದಿಗೆ ಸಲ್ಲಿಸುವುದು.
6) ಈ ತಾತ್ಕಾಲಿಕ ಪಟ್ಟಿಯಲ್ಲಿ ಯಾವುದೇ ನಮೂದುಗಳು/ಮಾಹಿತಿ ಸರಿ ಇರದೇ ಇದ್ದಲ್ಲಿ, ಸರಿಪಡಿಸಲು ಪುಷ್ಠೀಕರಿಸುವ ದಾಖಲೆಗಳೊಂದಿಗೆ ಆಕ್ಷೇಪಣೆಗಳನ್ನು ಉಪ ನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ ಇವರ ವಿಳಾಸಕ್ಕೆ ***ಸ್ಪೀಡ್ ಪೋಸ್ಟ*** ಮೂಲಕ ಅಥವಾ ನೇರವಾಗಿ ಈ ಕಾರ್ಯಾಲಯಕ್ಕೆ ದಿನಾಂಕ:05-03-2021 ರೊಳಗಾಗಿ ತಲುಪುವಂತೆ ಸಲ್ಲಿಸುವುದು. ನಿಗದಿತ ಅವಧಿಯೊಳಗಾಗಿ ಆಕ್ಷೇಪಣೆಗಳನ್ನು ಸಲ್ಲಿಸದೇ ಇದ್ದಲ್ಲಿ ಪ್ರಸ್ತುತ ಪ್ರಕಟಿಸಿದ ತಾತ್ಕಾಲಿಕ ಜೇಷ್ಠತಾ ಪಟ್ಟಿಯಲ್ಲಿನ ಮಾಹಿತಿ ಸರಿಯೆಂದು ಪರಿಗಣಿಸಿ ಪಟ್ಟಿಯನ್ನು ಅಂತಿಮಗೊಳಿಸಲಾಗುವುದು.

ಉಪ ನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ

ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು(ಆಡಳಿತ) ರವರ ಕಾರ್ಯಾಲಯ ಕಲಬುರಗಿ

ಸಂಖ್ಯೆ:ಸಿ2(4)/ಆಡಳಿತ/ಸೇವಕ/ಬಡ್ತಿ/113/2020-21 ದಿನಾಂಕ:15-02-2021

**-: ಸೂಚನಾ ಪತ್ರ :-**

***ಆಕ್ಷೇಪಣೆ ಸಲ್ಲಿಸುವ ನೌಕರರುಗಳಿಗೆ ಈ ಕೆಳಗಿನ ಅಂಶಗಳನ್ನು ಪಾಲಿಸಲು ತಿಳಿಸಿದೆ.***

1) ಆಕ್ಷೇಪಣೆಯನ್ನು ಅಧಿಸೂಚನೆಯೊಂದಿಗೆ ಲಗತ್ತಿಸಿದ ನಮೂನೆಯಲ್ಲಿ ಎಲ್ಲಾ ಅಂಕಣದಲ್ಲಿ ಕಡ್ಡಾಯವಾಗಿ ಮಾಹಿತಿ ಭರಿಸಿ, 19 ಅಂಕಣದಲ್ಲಿ ಸರಿಪಡಿಸಬೇಕಾದ ಅಂಗಳನ್ನು ನಮೂದಿಸತಕ್ಕದ್ದು, ಅದಕ್ಕೆ ಪೂರಕ ದಾಖಲೆಗಳನ್ನು ಕೂಡಾ ಸಲ್ಲಿಸುವುದು.
2) ಆಕ್ಷೇಪಣೆಯನ್ನು ಸಲ್ಲಿಸುವಾಗ ನನಗಿಂತ ಕಿರಿಯರು ಮೇಲೆ ಬಂದಿದ್ದಾರೆಂದು ಅಂದಾಜಿನ ಮೇಲೆ ಆಕ್ಷೇಪಣೆಯನ್ನು ಸಲ್ಲಿಸಿದ್ದಲ್ಲಿ ಪರಿಗಣಿಸುವುದಿಲ್ಲ. ಆಕ್ಷೇಪಣೆ ಸಲ್ಲಿಸುವ ನೌಕರರು ಮತ್ತು ತಮಗಿಂತ ಕಿರಿಯ ನೌಕರರು ಮೇಲೆ ಬಂದಿದ್ದಾರೆಂದು ಆಕ್ಷೇಪಿಸಲಾದ ನೌಕರರು ನಿಖರವಾದ ಸೇವಾ ವಿವರಗಳನ್ನು ಮತ್ತು ಪುಷ್ಠೀಕರಿಸುವ ದಾಖಲೆಗಳೊಂದಿಗೆ ತಪ್ಪದೇ ಈ ಅಧಿಸೂಚನೆಯೊಂದಿಗೆ ಲಗತ್ತಿಸಿದ ನಮೂನೆಯಲ್ಲಿ ಎಲ್ಲಾ ಅಂಕಣದಲ್ಲಿ ಕಡ್ಡಾಯವಾಗಿ ಮಾಹಿತಿ ಭರಿಸಿ, 19 ಅಂಕಣದಲ್ಲಿ ಸರಿಪಡಿಸಬೇಕಾದ ಅಂಶಗಳನ್ನು ನಮೂದಿಸಿ ಸಲ್ಲಿಸುವುದು.
3) ಆಕ್ಷೇಪಣೆಯನ್ನು ಈ ಕಾರ್ಯಾಲಯದ ವಿಳಾಸಕ್ಕೆ ಉಪ ನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ ಇವರ ವಿಳಾಸಕ್ಕೆ ಸ್ಪೀಡ್ ಪೋಸ್ಟ ಮೂಲಕ ಇಲ್ಲವೇ ನೇರವಾಗಿ ಈ ಕಾರ್ಯಾಲಯಕ್ಕೆ ಸಲ್ಲಿಸುವುದು.
4) ಆಕ್ಷೇಪಣೆಯನ್ನು ದಿನಾಂಕ:05-03-2021 ರೊಳಗಾಗಿ ಈ ಕಾರ್ಯಾಲಯಕ್ಕೆ ತಲುಪುವಂತೆ ಸಲ್ಲಿಸುವುದು. ಅವಧಿಯೊಳಗೆ ಬಂದ ಆಕ್ಷೇಪಣೆಗಳನ್ನು ಮಾತ್ರ ಪರಿಶೀಲಿಸಲಾಗುವುದು.
5) ದಿನಾಂಕ:05-03-2021 ರೊಳಗಾಗಿ ತಲುಪುವಂತೆ ಆಕ್ಷೇಪಣೆಗಳನ್ನು ಸಲ್ಲಿಸದೇ ಇದ್ದಲ್ಲಿ ಆಯಾ ನೌಕರರು ಮತ್ತು ಆಯಾ ಶಾಲಾ ಮುಖ್ಯಸ್ಥರ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ವೈಯಕ್ತಿಕ ಜವಾಬ್ದಾರಿಯ ಮೇರೆಗೆ ಮತ್ತು ಪ್ರಸ್ತುತ ಪ್ರಕಟಿಸಲಾದ ತಾತ್ಕಾಲಿಕ ಜೇಷ್ಠತಾ ಪಟ್ಟಿಯಲ್ಲಿನ ಸೇವಾ ವಿವರಗಳು ಸರಿಯಿರುತ್ತವೆಯೆಂದು ಪರಿಗಣಿಸಿ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಲಾಗುವುದು.

ಉಪ ನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ

## ಆಕ್ಷೇಪಣೆ ಸಲ್ಲಿಸುವ ನಮೂನೆ

(ವಿಸೂ: ಆಕ್ಷೇಪಣೆಯನ್ನು ಸ್ಪೀಡ್ ಪೋಸ್ಟ ಮೂಲಕ ಅಥವಾ ನೇರವಾಗಿ ಸಲ್ಲಿಸುವುದು)

ಗ್ರೂಪ-ಡಿ ವೃಂದದ ಸೇವಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ವಿವರ

| | | | | |
|---|---|---|---|---|
| 1 | ನೌಕರರ ಹೆಸರು | | | |
| 2 | ಮೋಬೈಲ್ ಸಂಖ್ಯೆ | | | |
| 3 | ಈಗಾಗಲೇ ಪ್ರಕಟಿಸಲಾದ ಜೇಷ್ಠತಾ ಪಟ್ಟಿಯಲ್ಲಿ ನಮೂದಿಸಿದ KGID ಸಂಖ್ಯೆ | | | |
| 4 | ಈಗಾಗಲೇ ಜೇಷ್ಠತಾ ಪಟ್ಟಿಯಲ್ಲಿ ನಮೂದಿಸಿದ KGID ಸಂಖ್ಯೆ ಮೊದಲನೆಯ KGID ಸಂಖ್ಯೆ ಆಗಿರದಿದ್ದಲ್ಲಿ ಮೊದಲ KGID ಸಂಖ್ಯೆ ನಮೂದಿಸುವುದು. | | | |
| 5 | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಾಲೆಯ/ಕಛೇರಿಯ ವಿಳಾಸ | | | |
| 6 | ನೇಮಕಾತಿ ಆದೇಶ ಸಂಖ್ಯೆ | | | |
| 7 | ಆಯ್ಕೆ ವಿಧಾನ | | | |
| 8 | ನೇಮಕಾತಿ ಯಾವ ಪಂಗಡ/ಜಾತಿಯಲ್ಲಿ ಆಗಿರುವರು | ಸಾಮಾನ್ಯ | ಪರಿಶಿಷ್ಟ ಜಾತಿ | ಪರಿಶಿಷ್ಟ ಪಂಗಡ |
| | | | | |
| 09 | ನೇಮಕಾತಿಗೊಂಡ ಹುದ್ದೆಯ ಪದನಾಮ | | | |
| 10 | ಸೇವೆಗೆ ಸೇರಿದ ದಿನಾಂಕ | | | |
| 11 | ಸೇವಾ ಸಕ್ರಮಗೊಂಡ ದಿನಾಂಕ | | | |
| 12 | ಎಸ್.ಎಸ್.ಎಲ್.ಸಿ ಪಾಸಾದ ವರ್ಷ | | | |
| 13 | ಪಿ.ಯು.ಸಿ ಪಾಸಾದ ವರ್ಷ | | | |
| 14 | ಸೇವಾ ಪುಸ್ತಕದಲ್ಲಿ ಇರುವಂತೆ ಸ್ವಂತ ಊರು | ಸ್ವಂತ ಊರು | ತಾಲ್ಲೂಕು | ಜಿಲ್ಲೆ |
| | | | | |
| 15 | ದಿನಾಂಕ:01-01-2015ರಇದ್ದಂತೆ ಸ್ಥಳೀಯ ವೃಂದ/ಉಳಿದ ಮೂಲ ವೃಂದಲ್ಲಿ ಇರಲು ಬಯಸಿದ ಬಗ್ಗೆ ಅಭಿಮತ ಪತ್ರದಂತೆ | ಸ್ಥಳಿಯ ವೃಂದದಲ್ಲಿ ಇರಲು ಬಯಸಲಾಗಿದೆ(ಹೆಚ್.ಕೆ) | ಉಳಿದ ಮೂಲ ವೃಂದದಲ್ಲಿ ಇರಲು ಬಯಸಲಾಗಿದೆ(ಎನ್.ಹೆಚ್.ಕೆ) | |
| | | | | |
| 16 | ತಾತ್ಕಾಲಿಕ ಜೇಷ್ಠತಾ ಪಟ್ಟಿಯಲ್ಲಿ ಕಂಡುಬಂದ ನಮೂದುಗಳು ಹಾಗೂ ಸರಿಪಡಿಸಬೇಕಾದ ಅಂಶಗಳು. | | | |
| 17 | ಷರಾ | | | |
| 18 | ನೌಕಕರ ರುಜು | | | |

ವಿಶೇಷ ಸೂಚನೆ:- ಮೇಲ್ಕಂಡ ತಮ್ಮ ಆಕ್ಷೇಪಣೆಗಳನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ಸಲ್ಲಿಸುವುದು.